# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103
ದೂರವಾಣಿ; 0816-225596, 0816-2255597, 0816-2255597 ಫ್ಯಾಕ್ಸ್ ; 0816-2270719


ಸಂಖ್ಯೆ:ತುವಿ:ಶೈವಿ:PG:2023-24:12847

ದಿನಾಂಕ:18.10.2023

## ಅಧಿಸೂಚನೆ

ವಿಷಯ : ಸ್ನಾತಕೋತ್ತರ ಎಂ.ಸಿ.ಎ. (MCA) ಕಾರ್ಯಕ್ರಮದ ಪ್ರವೇಶ ಮಿತಿ ಹೆಚ್ಚಿಸುವ ಕುರಿತು

ಉಲ್ಲೇಖ : 1) ಸರ್ಕಾರದ ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಇವರ ಪತ್ರ ದಿನಾಂಕ:03.10.2023

2) ಸಂಯೋಜಕರು, ಸ್ನಾತಕೋತ್ತರ ಎಂ.ಸಿ.ಎ. ವಿಭಾಗ, ತು.ವಿ.ತು. ಇವರ ಪತ್ರ ದಿನಾಂಕ:11.02.2022

3) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 18.10.2023 (ಕಂಡಿಕೆ: 71 ಪುಟ ಸಂಖ್ಯೆ: 19)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಸರ್ಕಾರದ ಪತ್ರದಲ್ಲಿ ತುಮಕೂರು ವಿಶ್ವವಿದ್ಯಾನಿಲಯದಲ್ಲಿನ ಎಂಸಿಎ ಕೋರ್ಸಿನ ವಿದ್ಯಾರ್ಥಿ ಪ್ರಮಾಣವನ್ನು ಹೆಚ್ಚಿಸುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ರಡಿ ನಿಹಿತವಾಗುವ ಅಧಿಕಾರಗಳನ್ವಯ ನಿಯಮಾನುಸಾರ ಪರಿಶೀಲಿಸಿ, AICTE ಮಾನದಂಡ ಪೂರೈಸಿಕೊಂಡು ಪ್ರಸ್ತುತ ಇರುವ ಮಾನವ ಹಾಗೂ ಆರ್ಥಿಕ ಸಂಪನ್ಮೂಲಗಳಡಿಯಲ್ಲಿಯೇ ಹೊಂದಾಣಿಕೆ ಮಾಡಿಕೊಂಡು ಎಂ.ಸಿ.ಎ. ಕೋರ್ಸಿನ ವಿದ್ಯಾರ್ಥಿ ಪ್ರಮಾಣ ಹೆಚ್ಚಳದ ಬಗ್ಗೆ ಸೂಕ್ತ ನಿರ್ಣಯ ತೆಗೆದುಕೊಳ್ಳುವಂತೆ ವಿಶ್ವವಿದ್ಯಾನಿಲಯಕ್ಕೆ ನಿರ್ದೇಶಿಸಲಾಗಿರುತ್ತದೆ.

ಉಲ್ಲೇಖ (02)ರಲ್ಲಿ ಸಂಯೋಜಕರು, ಸ್ನಾತಕೋತ್ತರ ಎಂ.ಸಿ.ಎ. ವಿಭಾಗ, ಇವರು ಮನವಿ ಸಲ್ಲಿಸಿದ್ದು, ತುಮಕೂರು ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಎಂ.ಸಿ.ಎ. (Main Campus) ವಿಭಾಗದಲ್ಲಿ ಪ್ರವೇಶ ಮಿತಿಯು 30 ಸೀಟುಗಳಿದ್ದು, ಸಿಂಡಿಕೇಟ್ ಸಭೆಯಲ್ಲಿ 20 ಸೀಟುಗಳನ್ನು ಹೆಚ್ಚಿಸಲು ಅನುಮತಿ ದೊರೆತಿದ್ದು, ಈಗ ಮತ್ತೆ ಇನ್ನೂ 10 ಸೀಟುಗಳನ್ನು ಹೆಚ್ಚಿಸಿ ಈ ಶೈಕ್ಷಣಿಕ ವರ್ಷದಿಂದ ಒಟ್ಟು 60 ಸೀಟುಗಳಿಗೆ ಅನುಮತಿ ನೀಡಬೇಕೆಂದು ಕೋರಿರುತ್ತಾರೆ.

ಉಲ್ಲೇಖ (1)ರ ಸರ್ಕಾರಿ ಪತ್ರದ ನಿರ್ದೇಶನದನ್ವಯ, ಉಲ್ಲೇಖ (2)ರ ಮನವಿಯನ್ನು ಪರಿಶೀಲಿಸಲಾಗಿ, ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ **ವಿದ್ಯಾ ವಿಷಯಕ ಪರಿಷತ್ ಮತ್ತು ಸಿಂಡಿಕೇಟ್ ಸಭೆಗಳ ಅನುಮೋದನೆಯನ್ನು ಕಾಯ್ದಿರಿಸಿ ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಎಂ.ಸಿ.ಎ. (Main Campus) ವಿಭಾಗದ ವಿದ್ಯಾರ್ಥಿಗಳ ಪ್ರವೇಶ ಮಿತಿಯನ್ನು 2023-24ನೇ ಶೈಕ್ಷಣಿಕ ಸಾಲಿನಿಂದ 60 ಸೀಟುಗಳಿಗೆ ಹೆಚ್ಚಿಸಿ ಈ ಮೂಲಕ ಅಧಿಸೂಚಿಸಲಾಗಿದೆ.**

ಆದೇಶದ ಮೇರೆಗೆ

20/10/23

ಕುಲಸಚಿವರು
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ

ಗೆ,

ಸಂಯೋಜಕರು, ಸ್ನಾತಕೋತ್ತರ ಎ.ಸಿ.ಎ. ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

ಪ್ರತಿಗಳು:

1) ಮಾನ್ಯ ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಮಾಹಿತಿಗಾಗಿ.
2) ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
3) ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4) ಕಚೇರಿ ಪ್ರತಿ.